ವೇತನ ನಿಗದಿಗಾಗಿ ಮತ್ತು ಪಿಂಚಣಿ ಸೌಲಭ್ಯಕ್ಕಾಗಿ ಗಣನೆಗೆ ತೆಗೆದುಕೊಂಡು ಅರ್ಹತಾ ದಿನಾಂಕ ನಿಗಧಿಪಡಿಸುವ ಕಾನೂನು ಕ್ರಮ ಏನಾದರೂ ಸರ್ಕಾರದಲ್ಲಿ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಯಾವ ದಿನಾಂಕದಿಂದ ಅರ್ಹತಾ ದಿನಾಂಕ ನಿಗಧಿಪಡಿಸಲಾಗುವುದೆ?

ಶ್ರೀ ಖಮರುಲ್ ಇಸ್ಲಾಂ (ಕಾಮಿಕ ಸಚಿವರು) :

ಅ) ಮಿತವೇತನ ಪದವೀಧರರು ದಿನಾಂಕ:11-5-1991 ರಿಂದ ಸಲ್ಲಿಸಿದ ಸೇವೆಯನ್ನು ವಿಶ್ರಾಂತಿ ವೇತನಕ್ಕೆ ಅರ್ಹತಾದಾಯಕ ಸೇವೆಯಂದು ಪರಿಗಣಿಸಲಾಗುತ್ತದೆ. ಯಾವುದೇ ಮಿತ ವೇತನ ಪದವೀಧರರು 10 ವರ್ಷಗಳಿಗಿಂತ ಕಡಿಮೆ ಸೇವೆಯನ್ನು ಸಲ್ಲಿಸಿ ನಿವೃತ್ತರಾಗುವ ಪ್ರಕರಣಗಳಲ್ಲಿ ಅವರು ದಿ: 1-5-1991 ಕ್ಕೂ ಹಿಂದೆ ಸಲ್ಲಿಸಿರುವ ಸೇವೆಯ ಕಾಲು ಭಾಗವನ್ನು 10 ವರ್ಷಗಳಿಗೆ ಕೊರತೆಯಾಗುವ ಅವಧಿಗೆ ಸೀಮಿತಗೊಂಡಂತೆ 3 ವರ್ಷಗಳ ಗರಿಷ್ಟ ಮಿತಿಗೆ ಒಳಪಟ್ಟು ಅರ್ಹತಾದಾಯಕ ಸೇವೆಯೆಂದು ವಿಶ್ರಾಂತಿ ವೇತನ ಸೌಲಭ್ಯಕ್ಕಾಗಿ ಪರಿಗಣಿಸಲಾಗುತ್ತದೆ.

ಇದನ್ನು ಹೊರತುಪಡಿಸಿ ಇನ್ನಾವುದೇ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಬೈಂದೂರನ್ನು ತಾಲ್ಲೂಕು ಆಗಿ ಮಾರ್ಪಡಿಸುವುದು

631 (286) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಉಡುಪಿ ಜಿಲ್ಲೆಯ ಬೈಂದೂರನ್ನು ತಾಲ್ಲೂಕು ಆಗಿ ಪರಿವರ್ತಿಸುವ ಪ್ರಸ್ತಾವನೆ ಸರಕಾರದ ಮುಂದಿದೆಯೆ:

ಆ) ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು:

ಇ) ಇಲ್ಲದಿದ್ದಲ್ಲಿ, ರಾಜ್ಯದಲ್ಲಿ ಹಾಗೂ ಜಿಲ್ಲೆಯಲ್ಲಿ ಅತೀ ಹೆಚ್ಚು ಜನಸಂಖ್ಯೆ ಮತ್ತು ಅತೀ ದೊಡ್ಡ ವಿಸ್ತೀರ್ಣ ಹೊಂದಿರುವ ಬೈಂದೂರನ್ನು ತಾಲ್ಲೂಕು ಮಾಡದಿರುವ ಕಾರಣಗಳೇನು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ದೊಡ್ಡ ತಾಲ್ಲೂಕುಗಳನ್ನು ಪುನರ್ ವಿಂಗಡಿಸಿ ಹೊಸ ತಾಲ್ಲೂಕುಗಳನ್ನು ರಚಿಸಿರುವ ಬದಲು ಎಲ್ಲೆಲ್ಲಿ ಕೆಲಸದ ಒತ್ತಡ ಇದೆಯೋ ಅಲ್ಲಿ ವಿಶೇಷ ತಹಸೀಲ್ದಾರ್‌ರನ್ನು ನೇಮಕ ಮಾಡುವ ಬಗ್ಗೆ ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

7 ಎ ಭೂ ನ್ಯಾಯ ಮಂಡಳಿಗಳು

632 (287) ಶ್ರೀ ಗೋಪಾಲ್ ಪೂಜಾರಿ ಕೆ. (ಬೈಂದೂರು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 7 ಎ ಭೂ ನ್ಯಾಯ ಮಂಡಳಿಯಲ್ಲಿ ಅಸಿಸ್ಟೆಂಟ್ ಕಮೀಷನರ್‌ರವರು ಮಾತ್ರ ಇರಲು ಕಾರಣಗಳೇನು?

ಆ) ಇತರೇ ಸಮಿತಿಗಳಂತೆ ಇಲ್ಲಿಯೂ ಸಹ ಸಮಿತಿ ರಚಿಸಬಾರದೇಕೆ?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :